ಆ) ಹಾಗಿದ್ದಲ್ಲಿ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಘಟಕವನ್ನು (ಡಿಪೋ) ದಕ್ಷಿಣ ಕನ್ನಡ ಜಿಲ್ಲೆ ಸುಳ್ಯ ತಾಲ್ಲೂಕಿನಲ್ಲಿ ಪ್ರಾರಂಭಿಸುವ ವಿಚಾರ ಸರ್ಕಾರದ ಮುಂದಿದೆಯೇ, ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ,

ಇ) ಅದೇ ರೀತಿ ಪುತ್ತೂರು ಬಸ್ಸು ನಿಲ್ದಾಣದ ತಂಗುದಾಣವನ್ನು ನಿರ್ಮಾಣ ಮಾಡುವ ಯೋಜನೆ ಯಾವ ಹಂತದಲ್ಲಿದೆ, ಇದಕ್ಕೆ ಅನುಮೋದನೆ ಸಿಕ್ಕಿದೆಯೇ, ಇಲ್ಲದಿದ್ದಲ್ಲಿ, ಕಾರಣಗಳೇನು, ತಂಗುದಾಣ ನಿರ್ಮಾಣದ ಅಂದಾಜು ವೆಚ್ಚ ಪಟ್ಟಿ ತಯಾರಾಗಿದೆಯೇ,

ಈ) ಹಾಗಿಲ್ಲದಿದ್ದಲ್ಲಿ, ಇದುವರೆಗೂ ಕಾಮಗಾರಿ ಕೆಲಸ ಆಗದಿರಲು ಕಾರಣಗಳೇನು?

ಶ್ರೀ ಎನ್ ಚೆಲುವರಾಯಸ್ವಾಮಿ (ಸಾರಿಗೆ ಸಚಿವರು)

ಅ) ಬಂದಿದೆ ಸುಳ್ಯದಲ್ಲಿ ಬಸ್ ಘಟಕ ನಿರ್ಮಿಸುವ ಯೋಜನೆ ಇರುತ್ತದೆ ಆದರೆ ಪುತ್ತೂರು ಘಟಕದ ಬಸ್ಸುಗಳ ಕೊರತೆಯಿಂದಾಗಿ ಸುಳ್ಯ ತಾಲ್ಲೂಕಿನ ವ್ಯಾಪ್ತಿಯಲ್ಲಿ ಸಾರಿಗೆ ಕಾರ್ಯಾಚರಣೆಯಲ್ಲಿ ವ್ಯತ್ಯಯ ಉಂಟಾಗುತ್ತಿಲ್ಲ

ಆ) ಹೌದು ಸುಳ್ಯದಲ್ಲಿ ಬಸ್ ಘಟಕ ನಿರ್ಮಿಸಲು ಉದ್ದೇಶಿಸಿದ್ದು, ನಿರ್ಮಾಣಕ್ಕಾಗಿ ನಿವೇಶನವನ್ನು ನಿಗಮದ ವಶಕ್ಕೆ ಪಡೆಯುವ ಪ್ರಕ್ರಿಯೆಗಳು ಪ್ರಗತಿಯಲ್ಲಿರುತ್ತದೆ

ಇ, ಈ) ಪುತ್ತೂರು ಬಸ್ ನಿಲ್ದಾಣವನ್ನು ಅಭಿವೃದ್ಧಿ ಪಡಿಸುವ ಪ್ರಸ್ತಾವನೆಯಿದ್ದು, ಸಂಸ್ಥೆಯ ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ನಿರ್ಮಾಣ ಕಾರ್ಯವನ್ನು ಕೈಗೊಳ್ಳಲಾಗುವುದು

1514 (1493) ಶ್ರೀ ಶಂಕರಲಿಂಗೇಗೌಡ ಹೆಚ್ ಎಸ್ (ಚಾಮರಾಜ) – ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರದಲ್ಲಿ ಜವಾಹರಲಾಲ್ ನೆಹರು ನಗರ ಪುನರುಜ್ಜೀವನ ಯೋಜನೆಯಡಿ ಕೈಗೊಳ್ಳಲಾಗುತ್ತಿರುವ ವಿದ್ಯುಚ್ಛಕ್ತಿ ಇಲಾಖೆ ಕಾಮಗಾರಿಗಳಾವುವು,

ಆ) ಈ ಯೋಜನೆಯಡಿ ಕೈಗೊಳ್ಳಲಾಗುತ್ತಿರುವ ಅಭಿವೃದ್ಧಿ ಕಾರ್ಯಗಳ ಯೋಜನಾ ವೆಚ್ಚವೆಷ್ಟು,

ಇ) ಈ ಯೋಜನೆಯಡಿಯಲ್ಲಿನ ಕಾಮಗಾರಿಗಳ ಪ್ರಾರಂಭ, ಕಾಲಮಿತಿ ಮತ್ತು ಹಂತಗಳ ವಿವರಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಮೈಸೂರು ನಗರದಲ್ಲಿ ಜವಾಹರಲಾಲ್ ನೆಹರು ನಗರ ಪುನರುಜ್ಜೀವನ ಯೋಜನೆಯಡಿ ವಿದ್ಯುಚ್ಛಕ್ತಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಯಾವುದೇ ಪ್ರಸ್ತಾವನೆ ಸದ್ಯಕ್ಕೆ ಇರುವುದಿಲ್ಲ

ಆ ಮತ್ತು ಇ) ಉದ್ಭವಿಸುವುದಿಲ್ಲ

1516 (1319) ಡಾ॥ ಶರಣಪ್ರಕಾಶ್ ರುದ್ರಪ್ಪ ಪಾಟೀಲ್ (ಸೇಡಂ) – ಮಾನ್ಯ ಗೃಹ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮ ರಕ್ಷಣಾ ದಳಪತಿಗಳೆಂದು ಕೆಲಸ ನಿರ್ವಹಿಸುತ್ತಿರುವವರಿಗೆ ಗೌರವಧನ ಸೇರಿದಂತೆ ಅವರ ಹಲವಾರು ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ ಸರ್ಕಾರ ತೆಗೆದುಕೊಳ್ಳುತ್ತಿರುವ ಕ್ರಮಗಳೇನು?

ಶ್ರೀ ಎಂ ಪಿ ಪ್ರಕಾಶ್ (ಗೃಹ ಮಂತ್ರಿಗಳು)

ಅ) ಹೌದು

ಆ) ಗ್ರಾಮ ರಕ್ಷಣಾ ದಳಗಳ ನಿಯಮ 1965ರ ನಿಯಮ 16(ಐ) ಪ್ರಕಾರ ದಳಪತಿಗಳು ಕೆಲಸ ನಿರ್ವಹಿಸಿದ ಬಗ್ಗೆ ಕಾಲಕಾಲಕ್ಕೆ ವರದಿಗಳನ್ನು, ರಿಜಿಸ್ಟರ್ ಇತ್ಯಾದಿಗಳನ್ನು ನಿರ್ವಹಣೆ ಮಾಡಬೇಕಾಗಿರುತ್ತದೆ ಹಾಗೂ ಈ ದಾಖಲಾತಿಗಳನ್ನು ಸಂಬಂಧಿಸಿದ ಅಧಿಕಾರಗಳಿಂದ ಪ್ರಮಾಣೀಕರಿಸಬೇಕಾಗಿರುತ್ತದೆ ಆದರೆ, ಈ ರೀತಿಯಾಗಿ ಯಾವುದೇ ದಳಪತಿಗಳು ಮೇಲಿನ ನಿಯಮದನ್ವಯ ಕೆಲಸ ನಿರ್ವಹಿಸಿಲ್ಲವಾದ್ದರಿಂದ ಅವರು ಗೌರವಧನ ಪಡೆಯಲು ಅರ್ಹರಿರುವುದಿಲ್ಲ